## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1038 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/12/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೀದರ್ ಜಿಲ್ಲೆಯ ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿಸಿರುವ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು; ನೊಂದಾಯಿಸದೆ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ನೊಂದಣಿಗೆ ಸರ್ಕಾರ ಕೈಗೊಂಡ ಕ್ರಮವೇನು; | ಬೀದರ್ ಜಿಲ್ಲೆಯಲ್ಲಿ 2,63,159 ಕಾರ್ಮಿಕರು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಜಾರಿಗೊಳಿಸುತ್ತಿರುವ ಯೋಜನೆಗಳಡಿ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ.<br>ಮಂಡಳಿಯ ಫಲಾನುಭವಿಗಳಾಗಿ ರಾಜ್ಯದಾದ್ಯಂತ ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸದಲ್ಲಿ ತೊಡಗಿರುವ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಣಿ ಮಾಡಲು ಹಾಗೂ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮ ವಹಿಸಲಾಗುತ್ತಿದೆ.<br>1. ನೋಂದಣಿ ಮತ್ತು ನವೀಕರಣಕ್ಕಾಗಿ ಪಾವತಿಸಬೇಕಾಗಿದ್ದ ಶುಲ್ಕವನ್ನು ಕೈಬಿಡಲಾಗಿದೆ.<br>2. ಸ್ವತಃ ಅರ್ಜಿದಾರರೇ ಆನ್‌ಲೈನ್ ಮೂಲಕ ನೋಂದಣಿಗಾಗಿ ಅರ್ಜಿ ಸಲ್ಲಿಸಲು ಹಾಗೂ ಸೌಲಭ್ಯಗಳ ವಿಲೇವಾರಿಗಾಗಿ ಅರ್ಜಿ ಸಲ್ಲಿಸಲು ಮಂಡಳಿಯಿಂದ ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ಅವಕಾಶ ಕಲ್ಪಿಸಲಾಗಿದೆ.<br>3. ಕಾರ್ಮಿಕರು ಮಂಡಳಿಯ ನೋಂದಣಿ ಮತ್ತು ಸೌಲಭ್ಯಗಳ ಕುರಿತು ಮಾಹಿತಿಯನ್ನು ಪಡೆಯುವ ನಿಟ್ಟಿನಲ್ಲಿ 24/7 ಟೋಲ್ ಫ್ರೀ ನಂ.155214 ನ ವ್ಯವಸ್ಥೆ ಕಲ್ಪಿಸಲಾಗಿದೆ.<br>4. ತಾಲ್ಲೂಕು ಮಟ್ಟದಲ್ಲಿ ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಾಧಿಕಾರಿಯಾಗಿ ನೇಮಕ ಮಾಡಲಾಗಿದೆ.<br>ನೋಂದಣಿ ಹಾಗೂ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲು ಈ ಕೆಳಕಂಡ ಮಾಹಿತಿ ಶಿಕ್ಷಣ ಸಂವಹನ (ಐಇಸಿ) ಕಾರ್ಯಕ್ರಮಗಳನ್ನು ಮಂಡಳಿಯ ವತಿಯಿಂದ ರಾಜ್ಯಾದಾದ್ಯಂತ ಹಮ್ಮಿಕೊಳ್ಳಲಾಗಿರುತ್ತದೆ. |

| | | |
|---|---|---|
| | | ಐಇಸಿ ಚಟುವಟಿಕೆಗಳಾದ ಆಟೋ ಬ್ರ್ಯಾಂಡಿಂಗ್, ಟಿನ್‌ಪ್ಲೇಟ್ಸ್ ಅಳವಡಿಕೆ, ಶಿಕ್ಷಣ ಎಕ್ಸ್ಪೋಗಳಲ್ಲಿ ಭಾಗವಹಿಸಿ ಮಂಡಳಿಯ ಶೈಕ್ಷಣಿಕ ಸೌಲಭ್ಯಗಳ ಕುರಿತು ಪ್ರಚಾರ, ಗೋಡೆಬರಹ, ಕಿಯೋಸ್ಕ್‌ಗಳ ಅಳವಡಿಕೆ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಶ್ರಾವ್ಯ ಮಾಧ್ಯಮದ ಮೂಲಕ ಪ್ರಚಾರ, ಸನ್‌ಬೋರ್ಡ್ ಅಳವಡಿಕೆ, ಬಸ್ ಬ್ರಾಂಡಿಂಗ್, ದಸರಾ ಸಂದರ್ಭದಲ್ಲಿ ಎಲ್‌ಇಡಿ ವಾಹನ ಬ್ರಾಂಡಿಂಗ್, ರೈಲ್ವೆ ಬ್ರ್ಯಾಂಡಿಂಗ್, ರೈಲ್ವೆ ಸ್ಟೇಷನ್ ಬ್ರ್ಯಾಂಡಿಂಗ್ ಜಾಹೀರಾತು, ಮೈಸೂರು ರೈಲ್ವೆ ನಿಲ್ದಾಣದಲ್ಲಿ ವಿಡಿಯೋ ಜಾಹೀರಾತು, ಸಾಮಾಜಿಕ ಮಾಧ್ಯಮ ಚಟುವಟಿಕೆಗಳು, ಹೋರ್ಡಿಂಗ್ ಅಳವಡಿಕೆ, ಕಿರುಚಿತ್ರ/ ಸಾಕ್ಷ್ಯ ಚಿತ್ರಗಳ ತಯಾರಿಕೆ, ಕಾರ್ಮಿಕ ಇಲಾಖೆ ಮತ್ತು ಮಂಡಳಿಯ ಯೋಜನೆಗಳನ್ನೊಳಗೊಂಡ ಕ್ಯಾಲೆಂಡರ್‌ಗಳ ಮುದ್ರಣ, ಪತ್ರಿಕಾ ಜಾಹೀರಾತು ಮುಂತಾದವುಗಳ ಮೂಲಕ ಕಾರ್ಮಿಕರಲ್ಲಿ ಜಾಗೃತಿ ಮೂಡಿಸಲಾಗಿರುತ್ತದೆ.<br><br>ಮುಂದುವರಿದಂತೆ ಕಾರ್ಮಿಕ ದಿನಾಚರಣೆ, ಕಾರ್ಮಿಕ ಅದಾಲತ್ ಹಾಗೂ 75ನೇ ಸ್ವತಂತ್ರ ಮಹೋತ್ಸವ ಅಮೃತ ಮಹೋತ್ಸವದಂತಹ ವಿಶೇಷ ಸಂದರ್ಭಗಳಲ್ಲಿ ಕ್ಯಾಂಪೇನ್‌ಗಳನ್ನು ನಡೆಸಿ ರೇಡಿಯೋ ಜಾಹೀರಾತು, ಸ್ಕೇಟಿಂಗ್ ರ್‍ಯಾಲಿ, ಟಿ.ವಿ ಜಾಹೀರಾತು, ಆಟೋ ಪ್ರಚಾರ, ವಾಹನ ಬ್ರ್ಯಾಂಡಿಂಗ್, ಆಟೋಮೇಟೆಡ್ ಕಾಲ್ಸ್, ಆಟೋಮೇಟೆಡ್ ಮೆಸೇಜಸ್, ಪೋಸ್ಟ್ ಮುದ್ರಣ, ಪಾಂಪ್ಲೆಟ್‌ಗಳ ಮುದ್ರಣ, ಬೀದಿ ನಾಟಕ ಮುಂತಾದ ಚಟುವಟಿಕೆಗಳ ಮೂಲಕ ಕಾರ್ಮಿಕರಲ್ಲಿ ಸದರಿ ವಿಶೇಷ ಕಾರ್ಯಕ್ರಮಗಳ ಕುರಿತು ಹಾಗೂ ಮಂಡಳಿಯ ಯೋಜನೆಗಳ ಕುರಿತು ಪ್ರಚಾರ ನಡೆಸಲಾಗಿರುತ್ತದೆ. |
| ಆ) | ಕಟ್ಟಡ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳಾವುವು; ಕಾರ್ಮಿಕರ ಮಕ್ಕಳಿಗೆ ಒದಗಿಸುತ್ತಿರುವ ಸೌಲಭ್ಯಗಳಾವುವು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ಜಾರಿಗೊಳಿಸುತ್ತಿರುವ ಯೋಜನೆಗಳಡಿ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗಾಗಿ (ಮಕ್ಕಳಿಗೂ ಸೇರಿದಂತೆ) ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-1ರಲ್ಲಿ** ಒದಗಿಸಿದೆ. |
| ಇ) | ಕಟ್ಟಡ ಕಾರ್ಮಿಕರ ಹೊರತು ಇತರೆ ಕಾರ್ಮಿಕರಿಗೆ ಇರುವ ಸೌಲಭ್ಯಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ, ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಕರ್ನಾಟಕ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಫಲಾನುಭವಿಗಳಾದ ಕಾರ್ಮಿಕರಿಗೆ ದೊರೆಯುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ. |

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-</u>**<br><br>ಈ ಮಂಡಳಿಯು ಕಟ್ಟಡ ಕಾರ್ಮಿಕರನ್ನು ಹೊರತುಪಡಿಸಿ, ಕೆಳಕಂಡ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ**:- ಈ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>ಅ) **ಅಪಘಾತ ಪರಿಹಾರ ಸೌಲಭ್ಯ**: ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ.5/- ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2/- ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1/- ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br>(ಆ) **ಶೈಕ್ಷಣಿಕ ಧನ ಸಹಾಯ**: ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>(2) **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ**:-<br>ಈ ಯೋಜನೆಯಡಿ 11 ವರ್ಗಗಳ ಅಸಂಘಟಿತ ಕಾರ್ಮಿಕರಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ರನ್ನು ಉಚಿತವಾಗಿ ಆನ್‌ಲೈನ್ ಮೂಲಕ ನೋಂದಾಯಿಸಿ ಗುರುತಿನ ಚೀಟಿ ನೀಡುತ್ತಿದೆ. ಈ ಯೋಜನೆಯಡಿ ಯಾವುದೇ ಆರ್ಥಿಕ ಸೌಲಭ್ಯವನ್ನು ನೀಡುತ್ತಿಲ್ಲ.<br><br>(3) **ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ಜೀವ ವಿಮೆ ಮತ್ತು ಅಪಘಾತ ವಿಮಾ ಪರಿಹಾರ ಯೋಜನೆ**:-<br>2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು, "ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿಗ್ ಕಾರ್ಮಿಕರಿಗೆ(ಡೆಲಿವರಿ |

| | | |
|---|---|---|
| | | ಬಾಯ್ಸ್) 2.00 ಲಕ್ಷ ರೂ.ಗಳ ಜೀವ ವಿಮಾ ಸೌಲಭ್ಯ ಹಾಗೂ 2.00 ಲಕ್ಷ ರೂ.ಗಳ ಅಪಘಾತ ವಿಮಾ ಸೌಲಭ್ಯ ಸೇರಿಬಂತೆ ಒಟ್ಟು 4.00 ಲಕ್ಷ ರೂ.ಗಳ ವಿಮಾ ಸೌಲಭ್ಯ ಒದಗಿಸುವುದಾಗಿ" ಘೋಷಿಸಿದ್ದು, ಸರ್ಕಾರದ ಆದೇಶ ಸಂಖ್ಯೆ: ಕಾಇ 325 ಎಲ್‌ಇಟಿ 2023, ದಿನಾಂಕ:07-09-2023 ರನ್ವಯ ಹೊಸದಾಗಿ "ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ಜೀವ ವಿಮೆ ಮತ್ತು ಅಪಘಾತ ವಿಮಾ ಪರಿಹಾರ ಯೋಜನೆ"ಯನ್ನು ರೂಪಿಸಿ ಆದೇಶ ಹೊರಡಿಸಲಾಗಿರುತ್ತದೆ.<br><br>ಸರ್ಕಾರಿ ಆದೇಶದನ್ವಯ ಗಿಗ್ ಕಾರ್ಮಿಕರನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಲು ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ನೋಂದಣಿಗಾಗಿ ಕ್ರಮ ಕೈಗೊಳ್ಳಲಾಗಿದೆ.<br><br>(4) **ಕರ್ನಾಟಕ ರಾಜ್ಯ ದಿನಪತ್ರಿಕೆ ವಿತಾರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ**:<br>ಹೊಸದಾಗಿ ರೂಪಿಸಿರುವ ಈ ಯೋಜನೆಯಡಿ ದಿನ ಪತ್ರಿಕೆ ವಿತರಿಸುವ ಕಾರ್ಮಿಕರಿಗೆ ರೂ.2.00 ಲಕ್ಷಗಳ ಅಪಘಾತ ಪರಿಹಾರ ಹಾಗೂ ರೂ.1.00 ಲಕ್ಷದವರೆಗೆ ವೈದ್ಯಕೀಯ ಸೌಲಭ್ಯವನ್ನು ಒದಗಿಸಲಾಗುತ್ತಿದ್ದು, ಈ ಕುರಿತು ದಿನಾಂಕ: 22-11-2023 ರಂದು ಸರ್ಕಾರಿ ಆದೇಶ ಹೊರಡಿಸಲಾಗಿದ್ದು, ಯೋಜನೆಯ ಜಾರಿಗಾಗಿ ಕ್ರಮಕೈಗೊಳ್ಳಲಾಗುತ್ತಿದೆ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-**<br><br>ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆಯನ್ವಯ ಈ ಮಂಡಳಿಗೆ ಸಂಘಟಿತ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ. 20/- ರಂತೆ ವಂತಿಗೆಯಾಗಿ ಸ್ವೀಕರಿಸಲಾಗುತ್ತಿದ್ದು, ಸದರಿ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಸೌಲಭ್ಯಗಳ ಮಾಹಿತಿಯನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |

| | | |
|---|---|---|
| ಈ) | ಕಾರ್ಮಿಕರ ಸೇವಾ ಭದ್ರತೆ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಅಸಂಘಟಿತ ಕಾರ್ಮಿಕರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; ಕಳೆದ 3 ವರ್ಷದಲ್ಲಿ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ? | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅಸಂಘಟಿತ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ. |

ಅಸಂಘಟಿತ ವಲಯಕ್ಕೆ ಸೇರಿದ ನೋಂದಾಯಿತ ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-1 ರಲ್ಲಿ** ಒದಗಿಸಿದೆ.

ನೋಂದಾಯಿತ ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಕಳೆದ ಮೂರು ವರ್ಷದಲ್ಲಿ ವಿತರಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-3** ರಲ್ಲಿ ಒದಗಿಸಿದೆ.

ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಮಂಡಳಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳ ವಿವರವನ್ನು ಉಪ ಪ್ರಶ್ನೆ **'ಇ'** ನಲ್ಲಿ ಒದಗಿಸಿದೆ.

ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ ಕಳೆದ 3 ವರ್ಷಗಳಲ್ಲಿ ಮೇಲ್ಕಂಡ ಯೋಜನೆಗಳಡಿ ಒದಗಿಸಲಾದ ಸೌಲಭ್ಯಗಳ ವಿವರ ಈ ಕೆಳಗಿನಂತಿದೆ:

| **ವರ್ಷ** | **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ** | **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ** | | | |
|---|---|---|---|---|---|
| | | **ಅಪಘಾತ ಪರಿಹಾರ** | | **ಶೈಕ್ಷಣಿಕ ಸಹಾಯಧನ** | |
| | **ನೋಂದಾಯಿತ ಕಾರ್ಮಿಕರ ಸಂಖ್ಯೆ** | **ಪ್ರಕರಣಗಳ ಸಂಖ್ಯೆ** | **ಪರಿಹಾರದ ಮೊತ್ತ** | **ವಿದ್ಯಾರ್ಥಿಗಳ ಸಂಖ್ಯೆ** | **ಮೊತ್ತ** |
| 2020–21 | 1,140 | 2 | 10.00 | 2 | 20,000 |
| 2021–22 | 1,865 | 5 | 25.00 | 2 | 20,000 |
| 2022–23 | 155 | 6 | 30.00 | 3 | 30,000 |
| **ಒಟ್ಟು** | **3160** | **13** | **65.00** | **7** | **70,000** |

**ಕಾಇ 531 ಎಲ್ ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-01

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1038

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಮಂಡಳಿಯ ವತಿಯಿಂದ ಅನುಷ್ಠಾನಗೊಳಿಸಿರುವ ಸೌಲಭ್ಯಗಳು ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡಂತೆ ಮಾನದಂಡಗಳೊಂದಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ/ ಪತ್ನಿ ಮಾಸಿಕ ರೂ.1500/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ / ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ: ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.30,000/- ವರೆಗೆ
6. ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
7. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-
8. ಅಂತ್ಯಕ್ರಿಯೆ ವೆಚ್ಚ: ರೂ.4,000/- ಹಾಗೂ ಅನುಗ್ರಹ ರಾಶಿ ರೂ.71,000/- ಸಹಾಯಧನ
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,100 |
| 2 | 6 ರಿಂದ 7 ನೇ ತರಗತಿ | 1,250 |
| 3 | 8 ನೇ ತರಗತಿ | 1,350 |
| 4 | 9 ನೇ ಹಾಗೂ 10ನೇ ತರಗತಿ | 3,000 |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 6 | ಪದವಿ | 6,000 |
| 7 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 8 | ಸ್ನಾತಕೋತ್ತರ ಪದವಿ | 10,000 |
| 9 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 10 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಎಕ್ಸಿಲರಿ ನರ್ಸಿಂಗ್ ಆಂಡ್ ಮಿಡ್ ವೈಫ್ | 10,000 |

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 11 | ಬಿ.ಎಡ್ | 6,000 |
| 12 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 13 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 14 | ಎಮ್.ಟೆಕ್/ ಎಮ್.ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 15 | ಎಮ್‌ಡಿ ಮೆಡಿಕಲ್ | 12,000 |
| 16 | ಡಿ.ಎಡ್ | 4,600 |
| 17 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 18 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

10. ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ. 300/- ರಿಂದ ರೂ.20,000/- ವರೆಗೆ.
11. ಅಪಘಾತ ಪರಿಹಾರ: ಮರಣ ಹೊಂದಿದ್ದಲ್ಲಿ ರೂ.5,00,000/- ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ ರೂ.2,00,000/-
12. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿ ಚಿಕಿತ್ಸೆ, ಕಿಡ್ನಿ ಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೋಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ
13. ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್): ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ ರೂ.60,000/-
14. ತಾಯಿ ಮಗು ಸಹಾಯ ಹಸ್ತ: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ. 6,000/- ಗಳ ಸಹಾಯಧನ.

<u>ಅನುಬಂಧ-2</u>

## <u>ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1038</u>

## <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u>

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

<u>ಸೂಚನೆ :</u>

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ. 20:40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.

2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ಸಂಸ್ಥೆಗಳು klwb.karnataka.gov.in ಇಲ್ಲಿ ನೊಂದಾಯಿಸಿ ಅನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.

3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ಆನ್‌ಲೈನ್ ಮೂಲಕ ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

**<u>ಈ ಕೆಳಗಿನ ಯೋಜನೆಗೆ ಮಾಸಿಕ ವೇತನ ರೂ. 35,000/- ಗಿಂತ ಮೀರಿರಬಾರದು</u>.**

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**: ಪ್ರೌಢಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.6,000/ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/- ಪದವಿ ಶಿಕ್ಷಣಕ್ಕಾಗಿ ರೂ.10,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/- ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. **(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ. ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**

**<u>ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18-60 ವರ್ಷ</u>**

2. **ಕಾರ್ಮಿಕರಿಗೆ ವೈದ್ಯಕೀಯ ನೆರವು** : ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ. 1,000/-ದಿಂದ ಗರಿಷ್ಠ ರೂ. 25,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. 500/-ರಿಂದ ರೂ, 1000/-ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರಿಗೆ ಅಪಘಾತ ಧನ ಸಹಾಯ** : ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ. 1,000/- ಗರಿಷ್ಠ ರೂ. 10,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. **ಹೆರಿಗೆ ಭತ್ಯೆ ಸೌಲಭ್ಯ** : ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ ರೂ. 10,000/- ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

5. **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**: ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ 6 ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ. 10,000/- ಧನ ಸಹಾಯ ನೀಡಲಾಗುವುದು.

6. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ. 1,00,000/- ಧನ ಸಹಾಯ ನೀಡಲಾಗುವುದು.

7. **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. 1,00,000/- ಧನ ಸಹಾಯ ನೀಡಲಾಗುವುದು.

**ಧನ ಸಹಾಯವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್. ಮೂಲಕ ಜಮಾಮಾಡಲಾಗುವುದು.**

# ಅನುಬಂಧ-3

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1038**

## ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಫಲಾನುಭವಿಗಳಿಗೆ ನೀಡಿರುವ ವಿವಿಧ ಸೌಲಭ್ಯಗಳ ವಿವರ

| ಕ್ರ.ಸಂ | ಸೌಲಭ್ಯಗಳ ವಿವರ | ಫಲಾನುಭವಿಗಳ ಸಂಖ್ಯೆ | | |
|---|---|---|---|---|
| | | 2020-21 | 2021-22 | 2022-23 |
| 1 | ಶೈಕ್ಷಣಿಕ ಸಹಾಯಧನ | 115538 | 338738 | 301806 |
| 2 | ಮದುವೆ ಸಹಾಯಧನ | 16183 | 38401 | 55314 |
| 3 | ಅಂತ್ಯ ಸಂಸ್ಕಾರಕ್ಕೆ ವೆಚ್ಚ ಹಾಗೂ ಅನುಗ್ರಹ ರಾಶಿ | 3342 | 7082 | 7300 |
| 4 | ಪ್ರಮುಖ ವೈದ್ಯಕೀಯ ಸಹಾಯಧನ | 1235 | 2376 | 4663 |
| 5 | ಅಪಘಾತ ಪರಿಹಾರ | 129 | 354 | 647 |
| 6 | ನೊಂದಾಯಿತರಲ್ಲದ ಕಟ್ಟಡ ಕಾರ್ಮಿಕರ ಮರಣ ಪರಿಹಾರ | 14 | 15 | 37 |
| 7 | ಹೆರಿಗೆ ಸಹಾಯಧನ | 81 | 1798 | 5042 |
| 8 | ವೈದ್ಯಕೀಯ ವೆಚ್ಚ ಸಹಾಯಧನ | 212 | 598 | 386 |
| 9 | ಪಿಂಚಣಿ ಸೌಲಭ್ಯ | 643 | 4925 | 553 |
| 10 | ದುರ್ಬಲತೆ ಪಿಂಚಣಿ | 5 | 110 | 86 |
| 11 | ಕುಟುಂಬ ಪಿಂಚಣಿ | 5 | 16 | 3 |
| 12 | ಶ್ರಮ ಸಾಮರ್ಥ್ಯ-ಟೂಲ್ ಕಿಟ್ ಯೋಜನೆ | 40385 | 70645 | 297853 |
| 13 | ಬಿಎಂಟಿಸಿ ಬಸ್ ಪಾಸ್ | 50969 | 12581 | 157022 |
| 14 | ಕೆಎಸ್ಆರ್‌ಟಿಸಿ ಬಸ್ ಪಾಸ್ | 0 | 0 | 200000 |
| 15 | ವಸತಿ ಸೌಲಭ್ಯ | 0 | 0 | 22127 |
| 16 | ಶಿಶು ಪಾಲನಾ ಸೌಲಭ್ಯ | 218 | 3350 | 3313 |
| 17 | ತಾಯಿ ಮಗು ಸಹಾಯ ಹಸ್ತ ಯೋಜನೆ | 27 | 616 | 1726 |
| 18 | ಇಮ್ಯೂನಿಟಿ ಕಿಟ್ | 0 | 950000 | 0 |

| ಕ್ರ.ಸಂ | ಸೌಲಭ್ಯಗಳ ವಿವರ | ಫಲಾನುಭವಿಗಳ ಸಂಖ್ಯೆ | | |
|---|---|---|---|---|
| | | 2020-21 | 2021-22 | 2022-23 |
| 19 | ಐಎಎಸ್/ ಕೆಎಎಸ್ ತರಬೇತಿ ಯೋಜನೆ | 0 | 0 | 737 |
| 20 | ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆ | 0 | 123664 | 869167 |
| 21 | ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ | 0 | 3818 | 49140 |
| 22 | ನ್ಯೂಟ್ರೀಶನ್ ಕಿಟ್ | 0 | 0 | 200000 |
| 23 | ಕೋವಿಡ್-19 (ರೂ.5000/ 3000) ಗಳ ಪರಿಹಾರ | 1648431 | 1961941 | 0 |
| 24 | 2021-22ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ 600 ಕ್ಕಿಂತ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಪ್ರೋತ್ಸಾಹಧನ | 0 | 0 | 2187 |
| 25 | 6 ರಿಂದ 10 ನೇ ತರಗತಿ ವ್ಯಾಸಂಗ ಮಾಡುತ್ತಿರುವ ಕಾರ್ಮಿಕರ ಮಕ್ಕಳಿಗೆ ಟ್ಯಾಬ್ ಯೋಜನೆ | 0 | 0 | 16400 |
| 26 | ಶಾಲಾ ಕಿಟ್ | 0 | 0 | 102000 |
| | **ಒಟ್ಟು** | **18,77,417** | **35,21,028** | **22,97,509** |